# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಐಐಎಂ, ಐಐಟಿ, ಐಐಎಸ್‌ಸಿ ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: MWD 193 MDS 2017, ದಿನಾಂಕ: 20.05.2017.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಂನಿ/ ವಿವೇ/ ಐಐಟಿ/ ಸಿಆರ್-07/ 2023-24.

*****

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಕೆಳಕಂಡ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIM, IIT, IISC ಮುಂತಾದ ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ ರೂ.2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಲಾಗಿರುತ್ತದೆ.

1. Indian Institutes of Technology (IITs).
2. Indian Institute of Information Technology, (IIITs).
3. National Institutes of Technology (NITs).
4. Indian Institute of Management (IIMs).
5. Indian Institute of Science Education and Research (IISERs).
6. All India Institute of Medical Sciences (AIIMS).
7. All National Law University Schools (NLU).
8. Institute of National Importance (INIs).
9. Institute under State Legislature Act (IuSLAs).

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಪತ್ರದಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು IITs, IIITs, NITs, IIMs, IISERs, AIIMS, NLUs, INIs, IuSLAs ನಂತಹ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಇತರೆ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಸದರಿ ಪ್ರೋತ್ಸಾಹಧನ ಯೋಜನೆಯನ್ನು ವಿಸ್ತರಿಸಲು ಹಾಗೂ ಈಗಿರುವ ರೂ.2.00 ಲಕ್ಷಗಳ ಪ್ರೋತ್ಸಾಹ ಧನವನ್ನು ರೂ.4.00ಲಕ್ಷಗಳವರೆಗೆ ಹೆಚ್ಚಿಸಲು ಸರ್ಕಾರದ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

........2

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 362 MDS 2023, ದಿನಾಂಕ:18.10.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIM, IIT, IISC ಮುಂತಾದ ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ರಾಜ್ಯದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ ರೂ.2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

**ಪ್ರತಿಷ್ಠಿತ ಸಂಸ್ಥೆಗಳ ವಿವರ**

| ಕ್ರ. ಸಂ | ಸಂಸ್ಥೆಯ ಹೆಸರು | ವಿವರ |
|---|---|---|
| 01 | Indian Institutes of Technology (IITs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 02 | Indian Institute of Information Technology, (IIITs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 03 | National Institutes of Technology (NITs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 04 | Indian Institute of Management (IIMs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 05 | Indian Institute of Science Education and Research (IISERs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 06 | All India Institute of Medical Sciences (AIIMS). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 07 | All National Law University Schools (NLU). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |

.....3

| | | |
|---|---|---|
| 08 | Institute of National Importance (INIs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 09 | Institute under State Legislature Act (IuSLAs). | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 10 | University of Delhi New Delhi India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 11 | University of Madras Chennai, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 12 | Savitribai Phule Pune University Pune, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನುಪಡೆದಿರಬೇಕು. |
| 13 | University of Madras Chennai, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 14 | Savitribai Phule Pune Pune,India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 15 | Anna University Chennai India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 16 | Jawaharlal Nehru University, New Delhi | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 17 | O.P Jindal Global University Sonepat, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 18 | Manipal Academy of Higher Education, Manipal, Karnataka. | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 19 | University of Calcutta Kolkata, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 20 | University of Calcutta Kolkata, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 21 | Amrita Vishwa Vidyapeetham, Amritapuri, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |

......4

| | | |
|---|---|---|
| 22 | Amity University, Noida, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 23 | Aligarh Muslim University Aligarh, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 24 | University of Mumbai Mumbai,India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 25 | Birla Institute of Technology and Science, Pilani, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 26 | Panjab University Chandigarh, India | ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಮೆರಿಟ್/ ಪ್ರವೇಶ ಪರೀಕ್ಷೆಯ ಮೂಲಕ ದಾಖಲಾತಿಯನ್ನು ಪಡೆದಿರಬೇಕು. |
| 27 | IIT B-Arch | Architecture Aptitude test ಮೂಲಕ IIT Varanasi, IIT Kharagpur, IIT Roorkie ಯಲ್ಲಿ Architecture Course ಪ್ರವೇಶ ಪಡೆದ ಅಭ್ಯರ್ಥಿಗಳು |
| 28 | NDA | National Defence Academy ಪ್ರವೇಶ ಪರೀಕ್ಷೆಯ ಮೂಲಕ Army, Navy, Airforce Wings ನ NDA Course ಗಳಿಗೆ ಹಾಗೂ Indian Naval Academy Course ಗೆ ಪ್ರವೇಶ ಪಡೆದ ಅಭ್ಯರ್ಥಿಗಳು. |
| 29 | NID | NID Design, Aptitude Test ಪರೀಕ್ಷೆಯಮೂಲಕ National Institute of Design ನಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು. |
| 30 | ISI | Indian Statistical Institute Admission test ಪ್ರವೇಶ ಪರೀಕ್ಷೆಯ ಮೂಲಕ Indian Statistical Science ನಲ್ಲಿ ಪ್ರವೇಶಪಡೆದ ಅಭ್ಯರ್ಥಿಗಳು |
| 31 | NIELIT | NIELIT ಪ್ರವೇಶ ಪರೀಕ್ಷೆಯ ಮೂಲಕ National Institute of Electronics and Information Technology ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 32 | IMU | IMU –CET ಮೂಲಕ Indian Maritime University ಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |
| 33 | NCHM | NCHM-JEE ಮೂಲಕ National Council of Hotel Management ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 34 | SPA | JEE Mains ಮೂಲಕ School of planning and Architecture ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 35 | CIT | Central Institute of Technology-Diploma Test ಪ್ರವೇಶ ಪರೀಕ್ಷೆ ಮೂಲಕ Central Institute of Technology ಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |

| | | |
|---|---|---|
| 36 | UCEED | Under Graduate Common Entrance Exam ಮೂಲಕ IIT ಗಳಲ್ಲಿ Bachelor Design (B Des) ಪ್ರವೇಶ ಪಡೆದ ಅಭ್ಯರ್ಥಿಗಳು |
| 37 | ICAR | ICAR AIEEA ಪ್ರವೇಶ ಪರೀಕ್ಷೆ ಮೂಲಕ Indian Council of Agriculture Research ನಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |
| 38 | NISER | National Entrance Screening Test(NEST) ಪ್ರವೇಶ ಪರೀಕ್ಷೆ ಮೂಲಕ National Institute of Science Education and Research(NISER) ಹಾಗೂ UM-DAE ಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |
| 39 | AFMC | AFMC Entrance Exam ಮೂಲಕ Armed Force Medical College ಗಳಿಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 40 | IGRUA | IGRUA Entrance Test ಮೂಲಕ Indira Gandhi Rashtriya Uran Academy ಯಲ್ಲಿ CPL ಮತ್ತು B.Sc Aviation ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 41 | NIPER-JEE | NIPER-JEE ಮೂಲಕ National Institute of Pharmacy ಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |
| 42 | TISS | CUET ಪರೀಕ್ಷೆಯಮೂಲಕ Guwahati, Hyderabad, Tuljapur, Tata Institutions of Social Science ನಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳು |
| 43 | HSEE | Humanities and Social Science Entrance Exam ಮೂಲಕ IIT Madras ನಲ್ಲಿ Integrated Humanities and Social Science ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |
| 44 | AISH | All India Speech and Hearing Entrance Exam ಮೂಲಕ AIISH ಗೆ ಪ್ರವೇಶ ಪಡೆದ ಅಭ್ಯರ್ಥಿಗಳು |

**ಷರತ್ತುಗಳು:**

1. ಸರ್ಕಾರದಿಂದ ಶಾಸನಬದ್ಧ ಅನುಮತಿ ಪಡೆದ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಮಾತ್ರ ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುತ್ತಾರೆ.
2. ಈ ಯೋಜನೆಯನ್ನು ಆನ್‌ಲೈನ್ ಪದ್ಧತಿಯಲ್ಲಿ ಅನುಷ್ಠಾನಗೊಳಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರು ಕ್ರಮವಹಿಸತಕ್ಕದ್ದು.
3. ಈ ಯೋಜನೆಯನ್ನು ಪ್ರಸಕ್ತ ಸಾಲಿನಲ್ಲಿ ಒದಗಿಸಿರುವ ಅನುದಾನದ ಮಿತಿಯಲ್ಲಿ ಜನಸಂಖ್ಯೆಯ ಅನುಪಾತಕ್ಕನುಗುಣವಾಗಿ ಪ್ರೋತ್ಸಾಹಧನ ನೀಡಲು ಕ್ರಮವಹಿಸತಕ್ಕದ್ದು.

……6

4. ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು. (ಹೊರ ರಾಜ್ಯಗಳಿಂದ ಬಂದು ಕರ್ನಾಟಕ ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಈ ವಿದ್ಯಾರ್ಥಿವೇತನಕ್ಕೆ ಅರ್ಹರಾಗಿರುವುದಿಲ್ಲ, ಪರಂತು ಕರ್ನಾಟಕದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಹೊರ ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ).

5. ಗಡಿನಾಡು ಭಾಗದ ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೂ ಸಹ ವಿದ್ಯಾರ್ಥಿವೇತನ ನೀಡತಕ್ಕದ್ದು.

6. ವಿದ್ಯಾರ್ಥಿಯ ಕುಟುಂಬದ ವಾರ್ಷಿಕ ಆದಾಯವು ರೂ.8.00 ಲಕ್ಷಕ್ಕಿಂತ ಮೀರಿರಬಾರದು.

7. ಹಿಂದಿನ ವರ್ಷದ ಪರೀಕ್ಷೆಯಲ್ಲಿ ಅನುತ್ತೀರ್ಣರಾದ (ಬ್ಯಾಕ್ ಲಾಗ್) ವಿದ್ಯಾರ್ಥಿಗಳಿಗೆ ಈ ಪ್ರೋತ್ಸಾಹಧನ ಪಡೆಯುವ ಅವಕಾಶವಿರುವುದಿಲ್ಲ.

8. ಮಂಜೂರಾದ ಪ್ರೋತ್ಸಾಹಧನವನ್ನು ವಿದ್ಯಾರ್ಥಿಯ ಬ್ಯಾಂಕಿನ ಖಾತೆಗೆ ನೇರವಾಗಿ ಜಮಾ ಮಾಡುವುದು.

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ: 2225-04-277-0-03(051) ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಉತ್ತೇಜನ, ರಾಜ್ಯವಲಯ ಯೋಜನೆಯಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಎಫ್ ಡಿ 721 ವೆಚ್ಚ-3/2023, ದಿ:12.10.2023 ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

18/10/2023

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ವಸಂತನಗರ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
4. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.